**All India Radio: Bangalore**
**National Bulletin In Kannada**
**15.03.2026  1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**15.03.2026  1.10 p.m.**
**<><><><>**

ಮುಖ್ಯಾಂಶಗಳು

1. ಮುಂಬರುವ ನಾಲ್ಕು ರಾಜ್ಯಗಳು,  ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭೆ ಚುನಾವಣೆಗೆ ಇಂದು ವೇಳಪಟ್ಟಿ ಪ್ರಕಟ
2. ಮೈ ಭಾರತ್ ಬಜೆಟ್ ಕ್ವಿಸ್ಟ್ ೨೦೨೬ರ ವಿಜೇತರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಇಂದು ಸಂವಾದ
3. ಪಶ್ಚಿಮ ಏಷ್ಯಾ ಸಂಘರ್ಷ; ೧೪ ವಿಮಾನಗಳ ಹಾರಾಟ ರದ್ದುಗೊಳಿಸಿದ ಏರ್ ಇಂಡಿಯಾ
4. ಇಂಡಿಯನ್ ವೇಲ್ಸ್ ಟೆನ್ನಿಸ್ ಪಂದ್ಯಾವಳಿ; ಫೈನಲ್ ಪಂದ್ಯದಲ್ಲಿಂದು ಸಬಲೆಂಕಾ-ರಿಬಾಕಿನಾ ಮುಖಾಮುಖಿ

<><><><>

ಕೇಂದ್ರ ಚುನಾವಣಾ ಆಯೋಗ ಇಂದು ಸಂಜೆ ೪ ಗಂಟೆಗೆ ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಯ ವೇಳಾಪಟ್ಟಿಯನ್ನು ಪ್ರಕಟಿಸಲಿದೆ.  ಅಸ್ಸಾಂ, ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ ಮತ್ತು ಪುದುಚೇರಿಯಲ್ಲಿ ವಿಧಾನಸಭಾ ಚುನಾವಣೆಗಳು ನಡೆಯಲಿವೆ. ಪಶ್ಚಿಮ ಬಂಗಾಳದ ೨೯೪ ಸದಸ್ಯರ ವಿಧಾನಸಭೆಯ ಅವಧಿ ಮೇ ೭ ರಂದು ಕೊನೆಗೊಳ್ಳುತ್ತದೆ. ಅಸ್ಸಾಂನ ೧೨೬ ಸದಸ್ಯರ ವಿಧಾನಸಭೆಯ ಅವಧಿ ಮೇ ೨೦ ರಂದು ಮತ್ತು ೧೪೦ ಸದಸ್ಯರ ಕೇರಳ ವಿಧಾನಸಭೆಯ ಅವಧಿ ಮೇ ೨೩ ರಂದು ಮುಕ್ತಾಯಗೊಳ್ಳುತ್ತದೆ. ತಮಿಳುನಾಡಿನಲ್ಲಿ ೨೩೪ ಸದಸ್ಯರ ವಿಧಾನಸಭೆಯ ಅವಧಿ ಮೇ ೧೦ ರಂದು ಮತ್ತು ಪುದುಚೇರಿಯಲ್ಲಿ ೩೦ ಸದಸ್ಯರ ವಿಧಾನಸಭೆಯ ಅವಧಿ ಜೂನ್ ೧೫ ರಂದು ಮುಕ್ತಾಯಗೊಳ್ಳುತ್ತದೆ.

<><><><>

ಪ್ರಧಾನ ಮಂತ್ರಿ ನರೇಂದ್ರ ಮೋದಿ ಇಂದಿನಿಂದ ಆರಂಭವಾಗಲಿರುವ 'ಮೈ ಭಾರತ್ ಬಜೆಟ್ ಕ್ವೆಸ್ಟ್ ೨೦೨೬' ರ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶ ಮಟ್ಟದ ವಿಜೇತರೊಂದಿಗೆ ಸಂವಾದ ನಡೆಸಲಿದ್ದಾರೆ. ಈ ಉಪಕ್ರಮವು ಯುವಜನರು ಕೇಂದ್ರ ಬಜೆಟ್ ಬಗ್ಗೆ ಚರ್ಚಿಸಲು ಮತ್ತು ವಿಕಸಿತ ಭಾರತ ಅಥವಾ ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸುವ ಬಗ್ಗೆ ತಮ್ಮ ದೃಷ್ಟಿಕೋನಗಳನ್ನು ಹಂಚಿಕೊಳ್ಳಲು ಪ್ರೋತ್ಸಾಹಿಸುತ್ತದೆ. ಭಾಗವಹಿಸುವ ಆಡಳಿತ ಮತ್ತು ಆರ್ಥಿಕ ಯೋಜನೆಯಲ್ಲಿ ಯುವ ಮನಸ್ಸುಗಳು ಅಥವಾ ಯುವ ಶಕ್ತಿಯನ್ನು ತೊಡಗಿಸಿಕೊಳ್ಳುವುದರ ಮೇಲೆ 'ಮೈ ಭಾರತ್ ಬಜೆಟ್ ಕ್ವೆಸ್ಟ್ ೨೦೨೬' ಕೇಂದ್ರೀಕರಿಸುತ್ತದೆ. ೨೦೪೭ ರ ವೇಳೆಗೆ ನೀತಿಯನ್ನು ರೂಪಿಸುವಲ್ಲಿ ಮತ್ತು ಆತ್ಮನಿರ್ಭರ ವಿಕಸಿತ ಭಾರತಕ್ಕೆ ಕೊಡುಗೆ ನೀಡುವಲ್ಲಿ ಯುವ ಪೀಳಿಗೆಯ ಪಾತ್ರವನ್ನು ಬಲಪಡಿಸುವ ಗುರಿಯನ್ನು ಈ ಕ್ರಮ ಹೊಂದಿದೆ. ಮೈ ಭಾರತ್ ಬಜೆಟ್ ಕ್ವೆಸ್ಟ್ ೨೦೨೬ಕ್ಕೆ ಭಾರಿ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ೧೨ ಲಕ್ಷಕ್ಕೂ ಹೆಚ್ಚು ಯುವ ಜನರು ಭಾಗವಹಿಸಿದ್ದು, ಮತ್ತು ೪೭ ಸಾವಿರ ಪ್ರಬಂಧಗಳನ್ನು ಸಲ್ಲಿಸಲಾಗಿದೆ. ಕೇಂದ್ರ ಬಜೆಟ್ ೨೦೨೬-ಶಿಕ್ಷಣ, ಕೌಶಲ್ಯ, ಉದ್ಯಮಶೀಲತೆ, ನಾವೀನ್ಯತೆ ಮತ್ತು ಭವಿಷ್ಯದ ಸಿದ್ಧ ಬೆಳವಣಿಗೆಗೆ ಅವಕಾಶಗಳಲ್ಲಿ ಹೂಡಿಕೆ ಮಾಡುವ ಮೂಲಕ ಭಾರತದ ಯುವಕರನ್ನು ಸಬಲೀಕರಣಗೊಳಿಸುವತ್ತ ಬಲವಾದ ಒತ್ತು ನೀಡುತ್ತದೆ. ಈ ಸಂದರ್ಭದಲ್ಲಿ, ಮೈ ಭಾರತ್ ವೇದಿಕೆಯಲ್ಲಿ ಆಯೋಜಿಸಲಾದ 'ಮೈ ಭಾರತ್ ಬಜೆಟ್ ಕ್ವೆಸ್ಟ್ ೨೦೨೬' ಒಂದು ವಿಶಿಷ್ಟ ಉಪಕ್ರಮವಾಗಿ ಹೊರಹೊಮ್ಮಿದೆ.

<><><><>

ಐರೋಪ್ಯ ಒಕ್ಕೂಟದ ಉಪಾಧ್ಯಕ್ಷೆ ಕಾಜಾ ಕಲ್ಲಾಸ್ ಅವರ ಆಹ್ವಾನದ ಮೇರೆಗೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಇಂದಿನಿಂದ ಬೆಲ್ಜಿಯಂನ ಬ್ರಸೆಲ್ಸ್‌ಗೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಅವರು, ವಿದೇಶಾಂಗ ವ್ಯವಹಾರಗಳ ಮಂಡಳಿ ಸಭೆಯಲ್ಲಿ ೨೭ ಐರೋಪ್ಯ ಒಕ್ಕೂಟದ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರೊಂದಿಗೆ ಸಂವಾದ ನಡೆಸಲಿದ್ದಾರೆ. ಡಾ. ಜೈಶಂಕರ್ ಅವರ ಭೇಟಿಯು ಐರೋಪ್ಯ ಒಕ್ಕೂಟದೊಂದಿಗೆ ಭಾರತದ ಕಾರ್ಯತಂತ್ರದ ಪಾಲುದಾರಿಕೆಯನ್ನು ಇನ್ನಷ್ಟು ಬಲಪಡಿಸುವ ನಿರೀಕ್ಷೆಯಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><><><>

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಬಿಕ್ಕಟ್ಟಿನ ಪರಿಸ್ಥಿತಿ ಹಿನ್ನೆಲೆಯಲ್ಲಿ ಏರ್ ಇಂಡಿಯಾ ಮತ್ತು ಏರ್ ಇಂಡಿಯಾ ಎಕ್ಸ್‌ಪ್ರೆಸ್ ಇಂದು ೧೪ ವಿಮಾನಗಳನ್ನು ರದ್ದುಗೊಳಿಸಿದೆ. ಆದರೆ, ಶಾರ್ಜಾದಿಂದ ದೆಹಲಿ, ಕಣ್ಣೂರು, ಕೊಚ್ಚಿ, ಕೋಯಿಕ್ಕೋಡ್, ಮುಂಬೈ ಮತ್ತು ತಿರುವನಂತಪುರಕ್ಕೆ ವಿಮಾನಗಳು ಕಾರ್ಯನಿರ್ವಹಿಸಲಿದೆ. ರಾಸ್ ಅಲ್ ಖೈಮಾದಿಂದ ಕೋಯಿಕ್ಕೋಡ್ ಮತ್ತು ಕೊಚ್ಚಿಗೆ ಎರಡು ವಿಮಾನಗಳು ಸಹ ಕಾರ್ಯನಿರ್ವಹಿಸಲಿವೆ ಎಂದು ಏರ್ ಇಂಡಿಯಾ ತಿಳಿಸಿದೆ. ಲಭ್ಯತೆ ಮತ್ತು ಕಾರ್ಯಾಚರಣೆಯ ಸಮಯದಲ್ಲಿ ಇರುವ ಷರತ್ತುಗಳಿಗೆ ಒಳಪಟ್ಟು ಈ ವಿಮಾನಗಳನ್ನು ನಿರ್ವಹಿಸಲಾಗುವುದು. ಯುಎಇ ವಿಮಾನ ನಿಲ್ದಾಣ ಅಧಿಕಾರಿಗಳ ಸೂಚನೆಗಳನ್ನು ಅನುಸರಿಸಿ, ಈ ಪ್ರದೇಶದಲ್ಲಿ ತಾತ್ಕಾಲಿಕ ಕಾರ್ಯಾಚರಣೆಗಳನ್ನು ಮೊಟಕುಗೊಳಿಸಲಾಗಿದೆ. ವಿಮಾನ ಪ್ರಯಾಣಿಕರು, ಯಾವುದೇ ಹೆಚ್ಚುವರಿ ಶುಲ್ಕವಿಲ್ಲದೆ ಭವಿಷ್ಯದ ದಿನಾಂಕಕ್ಕೆ ಟಿಕೆಟ್ ಮರು ಬುಕ್ ಮಾಡಬಹುದು ಅಥವಾ ಪೂರ್ಣ ಮರುಪಾವತಿಯನ್ನು ಆಯ್ಕೆ ಮಾಡಬಹುದು ಎಂದು ಏರ್ ಇಂಡಿಯಾ ವಿಮಾನಯಾನ ಸಂಸ್ಥೆ ತಿಳಿಸಿದೆ.

<><><>

ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ನಾಳೆಯಿಂದ ಮುಂದಿನ ತಿಂಗಳು ೧೦ ರವರೆಗೆ ನಡೆಯಬೇಕಿದ್ದ ೧೨ನೇ ತರಗತಿ ಪರೀಕ್ಷೆಗಳನ್ನು ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ-ಸಿಬಿಎಸ್ಇ ರದ್ದುಗೊಳಿಸಿದೆ. ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ೧೨ನೇ ತರಗತಿ ಅಭ್ಯರ್ಥಿಗಳಿಗೆ ಫಲಿತಾಂಶ ಘೋಷಣೆಯನ್ನು ಸೂಕ್ತ ಸಮಯದಲ್ಲಿ ಪ್ರತ್ಯೇಕವಾಗಿ ತಿಳಿಸಲಾಗುವುದು ಎಂದು ಎಂದು ಸಿಬಿಎಸ್ಇ ತಿಳಿಸಿದೆ.

<><><>

ಪರ್ಷಿಯನ್ ಕೊಲ್ಲಿಯಲ್ಲಿರುವ ಇರಾನ್‌ನ ಪ್ರಮುಖ ಕಚ್ಚಾ ತೈಲ ರಫ್ತು ಕೇಂದ್ರವಾದ ಖಾರ್ಗ್ ದ್ವೀಪದ ಮೇಲೆ ಅಮೆರಿಕ ನಡೆಸಿದ ದಾಳಿಯ ನಂತರ ಪಶ್ಚಿಮ ಏಷ್ಯಾದಾದ್ಯಂತ ಉದ್ವಿಗ್ನತೆ ಹೆಚ್ಚುತ್ತಿರುವ ಕಾರಣ ಯುಎಇ ಹೆಚ್ಚಿನ ಭದ್ರತಾ ಕಟ್ಟೆಚ್ಚರ ವಹಿಸಿದೆ. ಅಮೆರಿಕದ ಪಡೆಗಳು ಖಾರ್ಗ್ ದ್ವೀಪದಲ್ಲಿನ ಹಲವಾರು ಮಿಲಿಟರಿ ಗುರಿಗಳನ್ನು ನಾಶಪಡಿಸಿವೆ. ಆದರೆ ತೈಲ ರಫ್ತು ಮೂಲಸೌಕರ್ಯದ ಮೇಲೆ ದಾಳಿ ಮಾಡಲಿಲ್ಲ ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಆದರೆ, ಹಾನಿಯ ವಿವರವನ್ನು ಇರಾನಿನ ಅಧಿಕಾರಿಗಳು ಇನ್ನೂ ಸ್ಪಷ್ಟಪಡಿಸಿಲ್ಲ.

ಅಮೆರಿಕದ ಸುದ್ದಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಡೊನಾಲ್ಡ್ ಟ್ರಂಪ್, ಸಂಘರ್ಷವನ್ನು ಕೊನೆಗೊಳಿಸಲು ಒಪ್ಪಂದ ಮಾಡಿಕೊಳ್ಳಲು ಇರಾನ್ ಸಿದ್ಧವಾಗಿರುವಂತೆ ಕಂಡುಬಂದರೂ, ನಿಯಮಗಳು ಇನ್ನೂ ಸ್ಪಷ್ಟವಾಗಿಲ್ಲ ಎಂದು ಹೇಳಿದ್ದಾರೆ.

<><><>

ಅಂತಾರಾಷ್ಟ್ರೀಯ ಹಡಗು ಸಾಗಣೆಗೆ ಆಯಕಟ್ಟಿನ ಮಹತ್ವದ ಹಾರ್ಮುಜ್ ಜಲಸಂಧಿಯು ಇನ್ನೂ ಕಾರ್ಯನಿರ್ವಹಿಸುತ್ತಿದೆ. ಆದರೆ ಅಮೆರಿಕ ಮತ್ತು ಇಸ್ರೇಲ್‌ಗೆ ಸಂಬಂಧಿಸಿದ ಹಡಗುಗಳಿಗೆ ಜಲಮಾರ್ಗದ ಮೂಲಕ ಹಾದುಹೋಗಲು ಅನುಮತಿ ಇಲ್ಲ ಎಂದು ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಹೇಳಿದ್ದಾರೆ. ಇತ್ತೀಚಿನ ಮಿಲಿಟರಿ ಬೆಳವಣಿಗೆಗಳ ನಂತರ ಈ ಪ್ರದೇಶದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ಅವರಿಂದ ಈ ಹೇಳಿಕೆಗಳು ಬಂದಿವೆ. ಖಾಸಗಿ ಸುದ್ದಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಅಬ್ಬಾಸ್ ಅರಘ್ಚಿ, ಸಮುದ್ರ ಮಾರ್ಗವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಅನೇಕ ಭಾರತೀಯ ಹಡಗುಗಳು ಸೇರಿದಂತೆ ನೂರಾರು ಹಡಗುಗಳು ಪರ್ಷಿಯನ್ ಕೊಲ್ಲಿ ಮತ್ತು ಓಮನ್ ಕೊಲ್ಲಿಯ ನಡುವಿನ ಕಿರಿದಾದ ಸಮುದ್ರ ಮಾರ್ಗದಲ್ಲಿ ಸಿಲುಕಿಕೊಂಡಿರುವ ನಡುವೆ ಇರಾನ್ ಸಚಿವರಿಂದ ಈ ಸ್ಪಷ್ಟನೆ ಹೊರಬಿದ್ದಿದೆ.

<><><>

ಜಾರ್ಖಂಡ್‌ನ ಖುಂತಿ ಜಿಲ್ಲೆಯಲ್ಲಿ ನಿಷೇಧಿತ ಪೀಪಲ್ಸ್ ಲಿಬರೇಷನ್ ಫ್ರಂಟ್ ಇಂಡಿಯಾ ಸಂಘಟನೆಯ ೬ ಉಗ್ರರನ್ನು ಜಾರ್ಖಂಡ್ ಪೊಲೀಸರು ಬಂಧಿಸಿದ್ದಾರೆ. ತಾಂಜಾ ನದಿಯ ಸಮೀಪದ ಪ್ರದೇಶದಲ್ಲಿ ನಿಗದಿತ ಗುಪ್ತಚರ ಮಾಹಿತಿಯ ಮೇರೆಗೆ ಪೊಲೀಸರು ದಾಳಿ ನಡೆಸಿ, ಉಗ್ರರನ್ನು ಬಂಧಿಸಿದ್ದಾರೆ. ಅವರಿಂದ ಅಕ್ರಮವಾಗಿ ಸಂಗ್ರಹಿಸಿದ್ದ ಬಂದೂಕು, ಕಾಟ್ರಿಡ್ಜ್‌ಗಳು, ಮೊಬೈಲ್ ಫೋನ್‌ಗಳು, ಹಾಗೂ ಎರಡು ಕಾರ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಮನೀಶ್ ಕುಮಾರ್ ತಿಳಿಸಿದ್ದಾರೆ.

<><><>

ಮಾಜಿ ಮುಖ್ಯಮಂತ್ರಿ ಹಾಗೂ ಜಮ್ಮು ಮತ್ತು ಕಾಶ್ಮೀರ ನ್ಯಾಷನಲ್ ಕಾನ್ಫರೆನ್ಸ್ ಅಧ್ಯಕ್ಷ ಫಾರೂಕ್ ಅಬ್ದುಲ್ಲಾ ಅವರ ಮೇಲೆ ನಡೆದ ಗುಂಡಿನ ದಾಳಿಗೆ ಯತ್ನಿಸಿದ ಪ್ರಕರಣದ ತನಿಖೆಗಾಗಿ ಜಮ್ಮು ಮತ್ತು ಕಾಶ್ಮೀರ ಪೊಲೀಸರು, ವಿಶೇಷ ತನಿಖಾ ತಂಡ-ಎಸ್‌ಐಟಿ ರಚಿಸಿದೆ. ಜಮ್ಮು-ಸಾಂಬಾ-

ಕಥುವಾ ಶ್ರೇಣಿಯ ಪೊಲೀಸ್ ಉಪ ಮಹಾನಿರೀಕ್ಷಕರ ಮೇಲ್ವಿಚಾರಣೆಯಲ್ಲಿ ಎಸ್ಐಟಿಯನ್ನು ರಚಿಸಲಾಗಿದೆ. ಸಂಪೂರ್ಣ ತನಿಖೆ ನಡೆಸಿ, ನಿಗದಿತ ಸಮಯದೊಳಗೆ ತಂಡಕ್ಕೆ ತನಿಖೆ ಪೂರ್ಣಗೊಳಿಸಲು ನಿರ್ದೇಶಿಸಲಾಗಿದೆ. ಮಾರ್ಚ್ ೧೧ ರಂದು ಜಮ್ಮುವಿನ ಔತಣಕೂಟದ ಸಭಾಂಗಣದಲ್ಲಿ ನಡೆದ ಮದುವೆ ಸಮಾರಂಭದಲ್ಲಿ ಫಾರೂಕ್ ಅಬ್ದುಲ್ಲಾ ಭಾಗಿಯಾಗಿದ್ದ ಸಂದರ್ಭದಲ್ಲಿ ಅವರ ಮೇಲೆ ದಾಳಿ ಯತ್ನ ನಡೆಸಲಾಗಿತ್ತು.

<><><><>

ಕ್ಯಾಲಿಫೋರ್ನಿಯಾದಲ್ಲಿಂದು ನಡೆಯಲಿರುವ ಇಂಡಿಯನ್ ವೇಲ್ಸ್ ಟೆನ್ನಿಸ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ವಿಶ್ವದ ಅಗ್ರ ಶೇಯಾಂಕಿತ ಆಟಗಾರ್ತಿ ಅರೀನಾ ಸಬಲೆಂಕಾ ಮತ್ತು ಎಲೆನಾ ರಿಬಾಕಿನಾ ಮುಖಾಮುಖಿಯಾಗಲಿದ್ದಾರೆ. ಅರೀನಾ ಸಬಲೆಂಕಾ ಅವರು ನಿನ್ನೆ ನಡೆದ ಸೆಮಿಫೈನಲ್ ಪಂದ್ಯದಲ್ಲಿ ೧೪ನೇ ಶ್ರೇಯಾಂಕಿತೆ ಲಿಂಡಾ ನೇಸೋವಾ ಅವರನ್ನು ೬-೩, ೬-೪, ಅಂತರಗಳಿಂದ ಸೋಲಿಸಿದರು. ಈ ಪಂದ್ಯಾವಳಿಯ ೧೬ ಪಂದ್ಯಗಳ ಪೈಕಿ, ೧೫ ಪಂದ್ಯಗಳಲ್ಲಿ ಸಬಲೆಂಕಾ ಜಯಿಸಿದ್ದಾರೆ.

<><><><>

ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ ಇಂದು ನವದೆಹಲಿಯಲ್ಲಿ ನಡೆಯಲಿರುವ ಸಮಾರಂಭದಲ್ಲಿ ಭಾರತೀಯ ಕ್ರಿಕೆಟ್ ತಾರೆಯರಿಗೆ ಪ್ರತಿಷ್ಠಿತ ನಮನ್ ಪ್ರಶಸ್ತಿ-೨೦೨೬ ಪ್ರದಾನ ಮಾಡಲಿದೆ. ಸಮಾರಂಭದಲ್ಲಿ, ಭಾರತೀಯ ಕ್ರಿಕೆಟ್‌ಗೆ ಅಸಾಧಾರಣ ಸೇವೆ ಸಲ್ಲಿಸಿದ್ದಕ್ಕಾಗಿ ಕ್ರಿಕೆಟ್ ದಂತಕಥೆಗಳಾದ ರೋಜರ್ ಬಿನ್ನಿ ಮತ್ತು ರಾಹುಲ್ ದ್ರಾವಿಡ್ ಅವರು ಬಿಸಿಸಿಐ ನೀಡುವ ಅತ್ಯುನ್ನತ ಗೌರವವಾದ ಕರ್ನಲ್ ಸಿ.ಕೆ.ನಾಯ್ಡು ಜೀವಮಾನ ಸಾಧನೆ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ಇದೇ ವೇಳೆ, ಮಹಿಳಾ ಕ್ರಿಕೆಟ್‌ನಲ್ಲಿ ಅಸಾಧಾರಣ ಸಾಧನೆಗಾಗಿ ಭಾರತ ಮಹಿಳಾ ತಂಡದ ಮಾಜಿ ನಾಯಕಿ ಮಿಥಾಲಿ ರಾಜ್ ಅವರಿಗೆ ಮಹಿಳಾ ವಿಭಾಗದಲ್ಲಿ ಬಿಸಿಸಿಐ ಜೀವಮಾನ ಸಾಧನೆ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು.

<><><><>

ಇಂದು ವಿಶ್ವ ಗ್ರಾಹಕ ಹಕ್ಕುಗಳ ದಿನ. 'ಸುರಕ್ಷಿತ ಉತ್ಪನ್ನಗಳು; ಆತ್ಮವಿಶ್ವಾಸದ ಗ್ರಾಹಕರು' ಎಂಬುದು ಈ ವರ್ಷದ ಧ್ಯೇಯವಾಕ್ಯವಾಗಿದೆ. ಇದು ಗ್ರಾಹಕರ ಹಕ್ಕುಗಳು ಮತ್ತು ಅಗತ್ಯತೆಗಳ ಕುರಿತು, ಜಾಗತಿಕವಾಗಿ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶವಾಗಿದೆ. ಗ್ರಾಹಕರ

ಹಕ್ಕುಗಳನ್ನು ಗೌರವಿಸಬೇಕು ಮತ್ತು ರಕ್ಷಿಸಬೇಕು. ಗ್ರಾಹಕರ ಹಕ್ಕುಗಳನ್ನು ದುರ್ಬಲಗೊಳಿಸುವ, ಮಾರುಕಟ್ಟೆಯ ದುರುಪಯೋಗ ಮತ್ತು ಸಾಮಾಜಿಕ ಅನ್ಯಾಯಗಳ ವಿರುದ್ಧ ಪ್ರತಿಭಟಿಸಲು ವಿಶ್ವಸಂಸ್ಥೆ ಮೀಸಲಿರಿಸಿದ ದಿನ ಇದಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>